**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ನಿಲಯಗಳಲ್ಲಿ ಖಾಲಿ ಇರುವ ಗ್ರೂಪ್ 'ಡಿ' ವೃಂದದ ಅಡುಗೆಯವರು ಹಾಗೂ ಅಡುಗೆ ಸಹಾಯಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಕುರಿತು.

ಓದಲಾಗಿದೆ

1. ಸರ್ಕಾರದ ಆದೇಶ ಸಂಖ್ಯೆ:ಹಿಂವಕ 336 ಬಿಇಟಿ 2015 ದಿನಾಂಕ: 05.11.2015.
2. ಸರ್ಕಾರದ ಆದೇಶ ಸಂಖ್ಯೆ:ಹಿಂವಕ 90 ಬಿಇಟಿ 2016 (ಭಾಗ-2) ದಿನಾಂಕ:29.09.2016.
3. ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ:ಹಿಂವಕ 90 ಬಿಇಟಿ 2016 (ಭಾಗ-2) ದಿನಾಂಕ:18.11.2016.
4. ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ದಿನಾಂಕ:17.05.2017 ರಂದು ನಡೆದ ಸಭೆ ನಡವಳಿ.
5. ಆಯುಕ್ತರು, ಹಿಂವಕ ರವರ ಏಕಕಡತ ಪ್ರಸ್ತಾವನೆ ಸಂಖ್ಯೆ: ಹಿಂವಕಇ/ಸಿಬ್ಬಂದಿ-4/ಸಿ.ಆರ್-8/2015-16 ದಿನಾಂಕ:30.05.2017.

*****

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಆದೇಶದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ 1547 ಅಡುಗೆಯವರು ಮತ್ತು 2470 ಅಡುಗೆ ಸಹಾಯಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅನುಮತಿಯನ್ನು ನೀಡಿ, ಓದಲಾದ (2)ರ ಆದೇಶದಲ್ಲಿ ನೇರ ನೇಮಕಾತಿ ಸಂಬಂಧ ಮಾರ್ಗಸೂಚಿಗಳನ್ನು ಹೊರಡಿಸಿದ್ದು, ಓದಲಾದ (3)ರ ಆದೇಶದಲ್ಲಿ ಪರಿಷ್ಕೃತ ವೇಳಾಪಟ್ಟಿಯ ತಿದ್ದುಪಡಿ ಆದೇಶ ಹೊರಡಿಸಲಾಗಿರುತ್ತದೆ.

ತದನಂತರ ಕಾರಣಾಂತರದಿಂದ ಸದರಿ ನೇರ ನೇಮಕಾತಿ ಪ್ರಕ್ರಿಯೆಯನ್ನು ತಾತ್ಕಾಲಿಕವಾಗಿ ತಡೆಹಿಡಿಯಲಾಗಿದ್ದು, ಮೇಲೆ ಓದಲಾದ (4)ರಂತೆ ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ದಿನಾಂಕ:17.05.2017 ರಂದು ನಡೆದ ಸಭೆಯಲ್ಲಿ ಅಡುಗೆಯವರು ಹಾಗೂ ಅಡುಗೆ ಸಹಾಯಕರುಗಳ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ಸ್ಥಗಿತಗೊಳಿಸಲಾಗಿರುವ ಪ್ರಕ್ರಿಯೆಗೆ ಚಾಲನೆ ನೀಡಿ, ತ್ವರಿತವಾಗಿ ಎರಡು ತಿಂಗಳ ಒಳಗಾಗಿ ಭರ್ತಿ ಮಾಡಲು ಸೂಚನೆ ನೀಡಲಾಗಿದೆ. ದಿನಾಂಕ:17.05.2017ರಂದು ನಡೆದ ಸಭೆಯ ನಡವಳಿಗಳಂತೆ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರು ಏಕ ಕಡತದಲ್ಲಿ ಪ್ರಸ್ತಾವನೆ ಸಲ್ಲಿಸಿ, ನೇರ ನೇಮಕಾತಿ ಸಂಬಂಧ ಪರಿಷ್ಕೃತ ವೇಳಾ ಪಟ್ಟಿ, ದಾಖಲಾತಿ ಪರಿಶೀಲನೆ ಹಾಗೂ ಅಡುಗೆ ತಯಾರಿಕೆ ಪ್ರಾಯೋಗಿಕ ಪರೀಕ್ಷೆಗೆ ಅನುಪಾತ ನಿಗದಿಪಡಿಸಿ ಆದೇಶ ಹೊರಡಿಸಲು ಕೋರಿ ಮೇಲೆ ಓದಲಾದ (5)ರ ಏಕ ಕಡತದಲ್ಲಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಹಿಂವಕ 90 ಬಿಇಟಿ 2016(ಭಾ-2) ಬೆಂಗಳೂರು, ದಿನಾಂಕ:02.06.2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ನಿಲಯಗಳಲ್ಲಿ ಖಾಲಿ ಇರುವ ಅಡುಗೆಯವರು 1547, ಅಡುಗೆ ಸಹಾಯಕರು-2470 ಹುದ್ದೆಗಳನ್ನು ಭರ್ತಿ ಮಾಡುವ

ಸಂಬಂಧ ಈಗಾಗಲೇ ಅರ್ಜಿಗಳನ್ನು ಸ್ವೀಕರಿಸಿರುವಂತೆ ನೇಮಕಾತಿ ಪ್ರಕ್ರಿಯೆ ಚಾಲನೆಗೊಳಿಸಲು ಈ ಕೆಳಕಂಡ ವೇಳಾಪಟ್ಟಿ ಹಾಗೂ ಷರತ್ತುಗಳಿಗೊಳಪಟ್ಟು ಅನುಮತಿ ನೀಡಿ ಆದೇಶಿಸಿದೆ.

**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ನಿಲಯಗಳಲ್ಲಿ ಖಾಲಿ ಇರುವ ಅಡುಗೆಯವರು/ಅಡುಗೆ ಸಹಾಯಕರ ಹುದ್ದೆಗಳಿಗೆ ನೇರ ನೇಮಕಾತಿ ಆಯ್ಕೆ ಪ್ರಕ್ರಿಯೆಗೆ ನಿಗದಿಪಡಿಸಲಾದ ಪರಿಷ್ಕೃತ ವೇಳಾ ಪಟ್ಟಿ**

| ಕ್ರ ಸಂ | ಹುದ್ದೆಗಳ ವಿವರ | ದಾಖಲಾತಿಗಳ ಪರಿಶೀಲನೆ ದಿನಾಂಕ | ಅಡುಗೆ ತಯಾರಿಕೆ ಪ್ರಾಯೋಗಿಕ ಪರೀಕ್ಷೆ ದಿನಾಂಕ | ತಾತ್ಕಾಲಿಕ ಆಯ್ಕೆ ಪಟ್ಟಿ ಹೊರಡಿಸುವುದು. | ಅಂತಿಮ ಆಯ್ಕೆ ಪಟ್ಟಿ ಹೊರಡಿಸುವುದು. (ಆಕ್ಷೇಪಣೆಗಳಿಗೆ ಸಮಜಾಯಿಷಿ ನೀಡಿದ ನಂತರ) |
|---|---|---|---|---|---|
| 1. | 1. | 2. | 3. | 4. | 5. |
| 2. | ಅಡುಗೆಯವರು | 22.06.2017 | 28.06.2017 | 03.07.2017 | 18.07.2017 |
| 3. | ಅಡುಗೆ ಸಹಾಯಕರು | 23.06.2017 | 29.06.2017 | 03.07.2017 | 18.07.2017 |

<u>ಷರತ್ತುಗಳು:</u>

1. ಸ್ವೀಕರಿಸಲಾಗಿರುವ ಅರ್ಜಿಗಳಲ್ಲಿ ಪ್ರವರ್ಗವಾರು ಎಸ್.ಎಸ್.ಎಲ್.ಸಿ ಅಂಕಗಳ ಜೇಷ್ಠತೆ ಆಧಾರದ ಮೇಲೆ ಒಂದು ಹುದ್ದೆಗೆ ಐದು ಅಭ್ಯರ್ಥಿಗಳ 1:5ರ ಅನುಪಾತದಲ್ಲಿ ದಾಖಲಾತಿಗಳ ಪರಿಶೀಲನೆಗೆ ಆಹ್ವಾನಿಸುವುದು.
2. ದಾಖಲಾತಿ ಪರಿಶೀಲನೆಯಲ್ಲಿ ಅರ್ಹರಾದ ಅಭ್ಯರ್ಥಿಗಳಲ್ಲಿ ಪ್ರವರ್ಗವಾರು ಎಸ್.ಎಸ್.ಎಲ್.ಸಿ ಅಂಕಗಳ ಜೇಷ್ಠತೆ ಆಧಾರದ ಮೇಲೆ ಒಂದು ಹುದ್ದೆಗೆ ಮೂರು ಅಭ್ಯರ್ಥಿಗಳ 1:3ರ ಅನುಪಾತದಂತೆ ಅಡುಗೆ ತಯಾರಿಕೆಯ ಪ್ರಾಯೋಗಿಕ ಪರೀಕ್ಷೆಗೆ ಆಹ್ವಾನಿಸುವುದು.
3. ದಾಖಲಾತಿಗಳ ಪರಿಶೀಲನೆಯನ್ನು ಜಿಲ್ಲಾ ಕೇಂದ್ರದಲ್ಲಿ ನಡೆಸುವುದು. ಇದಕ್ಕಾಗಿ ಅಗತ್ಯ ಸೌಕರ್ಯಗಳುಳ್ಳ ಶಾಲೆ/ಕಾಲೇಜು ಯಾವುದಾದರೊಂದು ಸ್ಥಳವನ್ನು ಜಿಲ್ಲಾಧಿಕಾರಿಗಳು ನಿಗದಿಪಡಿಸುವುದು. ದಾಖಲಾತಿಗಳ ಪರಿಶೀಲನೆಯಲ್ಲಿ ಅರ್ಹರಾಗುವ ಅಭ್ಯರ್ಥಿಗಳಿಗೆ ಅಡುಗೆ ತಯಾರಿಕೆಯ ಪ್ರಾಯೋಗಿಕ ಪರೀಕ್ಷೆಗೆ ನಿಗದಿಪಡಿಸಿದ ದಿನಾಂಕದಂದು ಹಾಜರಾಗಲು ಅಂದೇ ಸೂಚನಾ ಪತ್ರವನ್ನು ನೀಡುವುದು.
4. ಎಸ್.ಎಸ್.ಎಲ್.ಸಿ. ವಿದ್ಯಾರ್ಹತೆಯೊಂದಿಗೆ ಅಭ್ಯರ್ಥಿಗಳು ಅಡುಗೆ ತಯಾರಿಕೆ ಬಗ್ಗೆ ತಿಳುವಳಿಕೆ ಹೊಂದಿರುವುದನ್ನು ಪರೀಕ್ಷಿಸಲು ಅಡುಗೆಯವರು/ಅಡುಗೆ ಸಹಾಯಕರ ಹುದ್ದೆಗಳಿಗೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳಿಗೆ ಅಡುಗೆ ತಯಾರಿಕೆಯ ಬಗ್ಗೆ ಪ್ರಾಯೋಗಿಕ ಪರೀಕ್ಷೆಯನ್ನು ಏರ್ಪಡಿಸಿ, ಇದರಲ್ಲಿ ಅರ್ಹರಾಗುವ ಅಭ್ಯರ್ಥಿಗಳನ್ನು ಎಸ್.ಎಸ್.ಎಲ್.ಸಿ. ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡುವುದು. ಅಡುಗೆ ತಯಾರಿಕೆಯ ಪ್ರಾಯೋಗಿಕ ಪರೀಕ್ಷೆಗೆ ಯಾವುದೇ ಅಂಕಗಳನ್ನು ನಿಗದಿಪಡಿಸಬಾರದು.
5. ಅಡುಗೆ ತಯಾರಿಕೆಯ ಪ್ರಾಯೋಗಿಕ ಪರೀಕ್ಷೆಯನ್ನು ಹಿಂದುಳಿದ ವರ್ಗಗಳ, ಸಮಾಜ ಕಲ್ಯಾಣ, ಅಲ್ಪ ಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು ಹಾಗೂ ಸ್ವಂತ ಕಟ್ಟಡ ಹೊಂದಿರುವ ಇಲಾಖೆಯ ವಿದ್ಯಾರ್ಥಿ ನಿಲಯಗಳಲ್ಲಿ ನಡೆಸುವುದು. ಪ್ರಾಯೋಗಿಕ ಪರೀಕ್ಷೆಗೆ ಬೇಕಾದ ಎಲ್ಲಾ ಪೂರ್ವ ತಯಾರಿಯನ್ನು ಹಾಗೂ ಅಗತ್ಯವಿರುವ ತಂಡಗಳನ್ನು ರಚಿಸಿಕೊಳ್ಳುವುದು. ಒಂದು ತಂಡವು ಗರಿಷ್ಠ 20 ಅಭ್ಯರ್ಥಿಗಳಿಗೆ ಅಡುಗೆ ತಯಾರಿಕೆ ಪರೀಕ್ಷೆಯನ್ನು ನಡೆಸತಕ್ಕದ್ದು.
6. ಅಭ್ಯರ್ಥಿಗಳ ದಾಖಲಾತಿಗಳ ಪರಿಶೀಲನೆ ಹಾಗೂ ಅಡುಗೆ ತಯಾರಿಕೆಯ ಪ್ರಾಯೋಗಿಕ ಪರೀಕ್ಷೆಯನ್ನು ನಿಗದಿಪಡಿಸಿದ ದಿನದಂದೇ ನಡೆಸಲು ಬೇಕಾದ ಅಗತ್ಯವಿರುವಷ್ಟು ತಂಡಗಳನ್ನು ಜಿಲ್ಲಾಧಿಕಾರಿಗಳು ರಚಿಸುವುದು.

7. ಅಡುಗೆ ತಯಾರಿಕೆಯ ಪ್ರಾಯೋಗಿಕ ಪರೀಕ್ಷೆ ಹಾಗೂ ದಾಖಲಾತಿ ಪರಿಶೀಲನೆಗೆ ಸಂಬಂಧಿಸಿದಂತೆ ತಗಲುವ ವೆಚ್ಚವನ್ನು ಅಭ್ಯರ್ಥಿಗಳಿಂದ ಪಡೆಯಲಾಗಿರುವ ಅರ್ಜಿ ಶುಲ್ಕದ ಮೊತ್ತದಲ್ಲಿ ಭರಿಸುವುದು.
8. ಅಭ್ಯರ್ಥಿಗಳ ದಾಖಲಾತಿ ಪರಿಶೀಲನೆ ನಂತರ ಅಡುಗೆ ತಯಾರಿಕೆಯ ಪ್ರಾಯೋಗಿಕ ಪರೀಕ್ಷೆಗೆ ಅರ್ಹರಾಗುವ ಅಭ್ಯರ್ಥಿಗಳ ಪಟ್ಟಿಯನ್ನು ಹಾಗೂ ಅಡುಗೆ ತಯಾರಿಕೆ ಪ್ರಾಯೋಗಿಕ ಪರೀಕ್ಷೆಯಲ್ಲಿ ಅರ್ಹರಾಗುವ ಅಭ್ಯರ್ಥಿಗಳ ಪಟ್ಟಿಯನ್ನು ಜಿಲ್ಲಾಧಿಕಾರಿಗಳ ವೆಬ್‌ಸೈಟ್‌ನಲ್ಲಿ ಕಡ್ಡಾಯವಾಗಿ ಆಯಾ ದಿನವೇ ಪ್ರಕಟಿಸುವುದು.
9. ಸರ್ಕಾರದ ಆದೇಶಗಳಂತೆ ಆಯಾ ಜಿಲ್ಲಾಧಿಕಾರಿಗಳು ಅಗತ್ಯ ಕ್ರಮವಹಿಸುವುದು. ಸರ್ಕಾರದ ಆದೇಶದಲ್ಲಿರುವ ಅಂಶಗಳನ್ನು ಹೊರತುಪಡಿಸಿ ಬೇರೆ ಯಾವುದೇ ರೀತಿಯ ವ್ಯವಸ್ಥೆಗಳನ್ನು ಅಗತ್ಯಕ್ಕೆ ತಕ್ಕಂತೆ ಕಲ್ಪಿಸಬೇಕಿದ್ದಲ್ಲಿ ಅಥವಾ ಬೇರೆ ಯಾವುದೇ ನಿರ್ಧಾರಗಳನ್ನು ತುರ್ತಾಗಿ ತೆಗೆದುಕೊಳ್ಳಬೇಕಾದಲ್ಲಿ ಜಿಲ್ಲಾ ಮಟ್ಟದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಗ್ರೂಪ್–ಡಿ ವೃಂದದ ನೇಮಕಾತಿ ಪ್ರಾಧಿಕಾರದ ಅಧ್ಯಕ್ಷರಾದ ಜಿಲ್ಲಾಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ.
10. ನೇರ ನೇಮಕಾತಿ ಪ್ರಕ್ರಿಯೆಯ ಪ್ರತಿಯೊಂದು ಹಂತವನ್ನು ವಿಡಿಯೋ ಚಿತ್ರೀಕರಣ ಮಾಡಿಕೊಂಡು ಪಾರದರ್ಶಕವಾಗಿ ಪ್ರಕ್ರಿಯೆ ಪೂರ್ಣಗೊಳಿಸಲು ಜಿಲ್ಲಾ ನೇಮಕಾತಿ ಪ್ರಾಧಿಕಾರದ ಅಧ್ಯಕ್ಷರಾದ ಜಿಲ್ಲಾಧಿಕಾರಿಗಳು ಕ್ರಮವಹಿಸುವುದು.
11. ಅಧಿಸೂಚನೆಯಲ್ಲಿ ನಿಗಧಿಪಡಿಸಿರುವ ಮಾನದಂಡಗಳನ್ವಯ ಎಸ್.ಎಸ್.ಎಲ್.ಸಿ. ವಿದ್ಯಾರ್ಹತೆ ಹಾಗೂ ಎಸ್.ಎಸ್.ಎಲ್.ಸಿ. ಯಲ್ಲಿ ಪಡೆದ ಅಂಕಗಳ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳುವುದು.
12. ಸರ್ಕಾರದ ಆದೇಶ ಸಂಖ್ಯೆ:ಹಿಂವಕ 90 ಬಿಇಟಿ 2016 (ಭಾಗ–2), ಬೆಂಗಳೂರು, ದಿನಾಂಕ:29.09.2016 ರಲ್ಲಿ ನೀಡಿರುವ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವುದು.
13. ಆಯ್ಕೆ ಪ್ರಕ್ರಿಯೆಗೆ ನಿಗಧಿಪಡಿಸಿರುವ ಮೇಲಿನ ದಿನಾಂಕಗಳಲ್ಲಿ ಯಾವುದೇ ಬದಲಾವಣೆಯನ್ನು ಮಾಡತಕ್ಕದಲ್ಲ.
14. ಈ ನೇಮಕಾತಿ ಪ್ರಕ್ರಿಯೆಯಲ್ಲಿ ಸ್ಪಷ್ಟೀಕರಣ ಕೋರಿ ಪ್ರಸ್ತಾವನೆಗಳನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್.ಆರ್.ಎರೆಕುಪ್ಪಿ)
ಸರ್ಕಾರದ ಅಧೀನ ಕಾರ್ಯದರ್ಶಿ–I
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು, ಇವರಿಗೆ ಕಳುಹಿಸುತ್ತಾ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ 500 ಪ್ರತಿಗಳನ್ನು ಒದಗಿಸಲು ಕೋರಿದೆ.

ಗೆ:

1. ಪ್ರಧಾನ ಮಹಾಲೇಖಪಾಲರು (ಎ & ಇ) (ಲೆಕ್ಕಪರಿಶೋಧನೆ–I ಮತ್ತು 2), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.

4. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
6. ಆಯುಕ್ತರು, ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ, ಕನ್ನಿಂಗ್‌ಹ್ಯಾಮ್ ರಸ್ತೆ, ಬೆಂಗಳೂರು.
7. ಮಹಾನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ನೃಪತುಂಗ ರಸ್ತೆ, ಬೆಂಗಳೂರು.
8. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಆನಂದರಾವ್ ವೃತ್ತ, ಬೆಂಗಳೂರು.
9. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-3&9), ಬೆಂಗಳೂರು.
10. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು-- ಆಯುಕ್ತರು, ಹಿಂ.ವ.ಕ. ಇಲಾಖಾ ಇವರ ಮುಖಾಂತರ.
11. ಎಲ್ಲಾ ಜಿಲ್ಲೆಗಳ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು, -- ಆಯುಕ್ತರು, ಹಿಂ.ವ.ಕ. ಇಲಾಖೆ ಇವರ ಮುಖಾಂತರ.
12. ಎಲ್ಲಾ ಜಿಲ್ಲೆಗಳ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು,-- ಆಯುಕ್ತರು, ಹಿಂವಕ ಇಲಾಖೆ, ಇವರ ಮುಖಾಂತರ.

<u>ಪ್ರತಿಯನ್ನು ಮಾಹಿತಿಗಾಗಿ:</u>

1. ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.
3. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.